ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಜಿಲ್ಲಾ ಪಂಚಾಯತಿ ಆಡಳಿತ ವ್ಯಾಪ್ತಿಯಿಂದ ಮುಕ್ತಿಗೊಳಿಸುವುದು

564 (186) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು;

ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಪಂಚಾಯಿತಿ ಆಡಳಿತ ವ್ಯಾಪ್ತಿಯಲ್ಲಿರುವುದು ನಿಜವಲ್ಲವೆ;

ಇ) ಹಾಗಿದ್ದಲ್ಲಿ, ಈ ನೌಕರರಿಗೆ ಸಮಯಕ್ಕೆ ಸರಿಯಾಗಿ ವೇತನ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಜಿಲ್ಲಾ ಪಂಚಾಯಿತಿ ಆಡಳಿತ ವ್ಯಾಪ್ತಿಯಿಂದ ಮುಕ್ತಗೊಳಿಸಲು ಸರ್ಕಾರ ನಿರ್ಧರಿಸಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದದ 46,632 ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ.

ಆ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಕೆಳಕಂಡ ಸಂಸ್ಥೆಗಳು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಒಳಪಡುತ್ತವೆ.

1) ಕಿರಿಯ ಮಹಿಳಾ ಸಹಾಯಕಿಯರ ಉಪಕೇಂದ್ರಗಳು

2) ಪ್ರಾಥಮಿಕ ಆರೋಗ್ಯ ಕೇಂದ್ರಗಳು

3) ಸಮುದಾಯ ಆರೋಗ್ಯ ಕೇಂದ್ರಗಳು

4) 100 ಹಾಸಿಗೆಗಳಿಗಿಂತ ಕಡಿಮೆ ಇರುವ ತಾಲ್ಲೂಕು ಆಸ್ಪತ್ರೆಗಳು

5) ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿಗಳು

6) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಗಳು

(ಇ) ಬಂದಿದೆ

(ಈ) ಇಲ್ಲ

ಸರ್ಕಾರಿ ಆಸ್ಪತ್ರೆಗಳಲ್ಲಿ ತ್ಯಾಜ್ಯ ವಿಲೇವಾರಿ

565 (187) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–